**Bangalore**
**Regional News**
**29.05.2026 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ನಾಳೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ - ನವದೆಹಲಿಯಲ್ಲಿ ವರಿಷ್ಠರೊಂದಿಗೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಚರ್ಚೆ

೨. ಡಿ.ಕೆ.ಶಿವಕುಮಾರ್ ಮುಂದಿನ ಮುಖ್ಯಮಂತ್ರಿ - ಮಾಜಿ ಸಚಿವ ಎಚ್.ಕೆ.ಪಾಟೀಲ್ ಸ್ಪಷ್ಟನೆ

೩. ಆತ್ಮ ನಿರ್ಭರ ಭಾರತ ಪರಿಕಲ್ಪನೆ ವಿಶ್ವದ ಅಭಿವೃದ್ಧಿಗೆ ಪೂರಕ - ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್

೪. ಭಟ್ಕಳ ದುರಂತ ಪ್ರಕರಣ ; ಸಂತ್ರಸ್ಥ ಕುಟುಂಬದವರಿಗೆ ಪ್ರತಿಪಕ್ಷ ನಾಯಕ ಆರ್.ಅಶೋಕ ಸಾಂತ್ವಾನ

೫. ರಾಜ್ಯದಲ್ಲಿ ಮುಂದಿನ ೫ ದಿನ ಭಾರೀ ಮಳೆ ಸಾಧ್ಯತೆ ; ಹವಾಮಾನ ಇಲಾಖೆ ಮುನ್ಸೂಚನೆ

**<><*<><>*><>**

ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಾಳೆ ಸಂಜೆ ಬೆಂಗಳೂರಿನ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆಯಲಿದೆ. ಸಭೆಯ ಅಧ್ಯಕ್ಷತೆಯನ್ನು ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಹಿಸಲಿದ್ದಾರೆ. ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ವಿಧಾನಪರಿಷತ್ತಿನಲ್ಲಿ ಸಭಾ ನಾಯಕರಾದ ಎನ್.ಎಸ್.ಬೋಸರಾಜು ಸೇರಿದಂತೆ ಕಾಂಗ್ರೆಸ್‌ನ ಎಲ್ಲಾ ಶಾಸಕರು ಭಾಗವಹಿಸಲಿದ್ದಾರೆ ಎಂದು ಪ್ರಕಟನೆ ತಿಳಿಸಿದೆ. ಈ ಸಭೆಯಲ್ಲಿ ನೂತನ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ನಡೆಯಲಿದ್ದು, ಅವರು ರಾಜ್ಯಪಾಲರನ್ನು ಭೇಟಿ ಮಾಡಿ ಸರ್ಕಾರದ ರಚನೆಗೆ ಹಕ್ಕು ಮಂಡಿಸಲಿದ್ದಾರೆ.

**<><*<><>*><>**

ಈ ನಡುವೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ನವದೆಹಲಿಯಲ್ಲಿಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಹಿರಿಯ ನಾಯಕ ರಾಹುಲ್‌ಗಾಂಧಿ, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಅವರನ್ನು ಭೇಟಿ ಮಾಡಿ, ಸರ್ಕಾರ ರಚನೆಯ ಬಗ್ಗೆ ಸಮಾಲೋಚನೆ ನಡೆಸಿದರು. ಇದಕ್ಕೂ ಮೊದಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಭೋಜನ ಸವಿಯುತ್ತ ರಾಜ್ಯ, ರಾಜಕೀಯದ ಬಗ್ಗೆ ಚರ್ಚೆ ನಡೆಸಿದರು. ಬಳಿಕ, ಸುದ್ದಿಗಾರರೊಂದಿಗೆ ಮಾತನಾಡಿದ ಡಿ.ಕೆ.ಶಿವಕುಮಾರ್, ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ಪ್ರಕ್ರಿಯೆಯನ್ನು

ಪೂರ್ಣಗೊಳಿಸುವುದು ತಕ್ಷಣದ ಆದ್ಯತೆಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಆ ಪ್ರಕ್ರಿಯೆ ಮುಗಿದ ಬಳಿಕ, ಇತರ ವಿಷಯಗಳ ಬಗ್ಗೆ ಚರ್ಚಿಸಲಾಗುವುದು ಎಂದು ಹೇಳಿದ್ದಾರೆ. ನಾಳೆ ಶಾಸಕಾಂಗ ಸಭೆ ನಿಗದಿಯಾಗಿದ್ದು, ಪಕ್ಷದ ಎಲ್ಲಾ ಶಾಸಕರು ನಗರದಲ್ಲಿ ಇರುವಂತೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಮುಂದಿನ ಮುಖ್ಯಮಂತ್ರಿ ಎಂದು ಮಾಜಿ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಸಂಸ್ಥೆಯೊಂದಕ್ಕೆ ಮಾಹಿತಿ ನೀಡಿರುವ ಅವರು, ಮುಂದಿನ ಎರಡು ದಿನಗಳಲ್ಲಿ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆಯಿದೆ ಎಂದು ಹೇಳಿದ್ದಾರೆ. ಈ ನಿರ್ಧಾರವನ್ನು ಅಧಿಕೃತಗೊಳಿಸಲು ನಾಳೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವರ ಕಾರ್ಯವೈಖರಿ ಹಾಗೂ ಅವರ ಪಕ್ಷ ನಿಷ್ಠೆಯನ್ನು ಎಚ್.ಕೆ.ಪಾಟೀಲ್ ಶ್ಲಾಘಿಸಿದ್ದಾರೆ.

**<><*<><>*><>**

"ಡಿಜಿಟಲ್ ಇಂಡಿಯಾ, ಮೇಕ್ ಇನ್ ಇಂಡಿಯಾ, ನವೋದ್ಯಮ ಮತ್ತು ಸ್ಕಿಲ್ ಇಂಡಿಯಾದಂತಹ ಯೋಜನೆಗಳ ಮೂಲಕ ದೇಶದ ಯುವಶಕ್ತಿಗೆ ವ್ಯಾಪಕ ಅವಕಾಶಗಳನ್ನು ಕಲ್ಪಿಸಲಾಗಿದ್ದು, ಭವಿಷ್ಯದಲ್ಲಿ ಭಾರತವು ಜಾಗತಿಕ ಮಟ್ಟದಲ್ಲಿ ಮುನ್ನಡೆ ಸಾಧಿಸಲಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅಭಿಪ್ರಾಯಪಟ್ಟಿದ್ದಾರೆ. ದಾವಣಗೆರೆಯಲ್ಲಿಂದು ಯುಬಿಡಿಟಿ ಎಂಜಿನಿಯರಿಂಗ್ ಕಾಲೇಜಿನ ಅಮೃತ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, 'ಆತ್ಮನಿರ್ಭರ ಭಾರತ' ಪರಿಕಲ್ಪನೆಯು ಇಡೀ ವಿಶ್ವದ ಅಭಿವೃದ್ಧಿಗೆ ಪೂರಕವಾಗಿರಲಿದೆ ಎಂದು ತಿಳಿಸಿದ್ದಾರೆ. ೨೧ನೇ ಶತಮಾನದಲ್ಲಿ ಜ್ಞಾನ, ನಾವೀನ್ಯತೆ ಸಂಶೋಧನೆ ಹಾಗೂ ಮಾನವ ಬಂಡವಾಳದ ಮೇಲೆ ಹೂಡಿಕೆ ಮಾಡಲಾಗುತ್ತಿದ್ದು, ಭಾರತದಲ್ಲಿ ತಾಂತ್ರಿಕ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದು ಹೇಳಿದ್ದಾರೆ. ದೇಶದ ಯುವ ಎಂಜಿನಿಯರ್‌ಗಳು, ಸಂಶೋಧಕರು ಮತ್ತು ಉದ್ಯಮಿಗಳಿಗೆ ರಾಷ್ಟ್ರೀಯ ಮಿಷನ್‌ಗಳು ಹೊಸ ಹಾದಿಗಳನ್ನು ತೆರೆದಿದ್ದು, ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ, ನೈತಿಕ ನಾಯಕತ್ವ ಗುಣ ಹೊಂದಿದ ದೇಶದ ನಿರ್ಮಾತೃಗಳನ್ನು ರೂಪಿಸುವ ಗುರುತರ ಜವಾಬ್ದಾರಿ ಎಂಜಿನಿಯರಿಂಗ್ ಸಂಸ್ಥೆಗಳ ಮೇಲಿದೆ" ಎಂದು ತಿಳಿಸಿದ್ದಾರೆ.

ಧ್ವನಿ : ಸಿ.ಪಿ.ರಾಧಾಕೃಷ್ಣನ್

ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ನಿರ್ಮಲಾನಂದನಾಥ ಸ್ವಾಮೀಜಿ, ಮಾಜಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್, ಡಾ.ಎಂ.ಸಿ.ಸುಧಾಕರ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

**<><*<><>*><>**

ಕಾಯ್ದಿರಿಸಿದ ತೀರ್ಪುಗಳನ್ನು ಮೂರು ತಿಂಗಳೊಳಗೆ ಪ್ರಕಟಿಸಬೇಕೆಂದು ಸುಪ್ರೀಂ ಕೋರ್ಟ್ ದೇಶದ ಎಲ್ಲಾ ಹೈಕೋರ್ಟ್‌ಗಳಿಗೆ ನಿರ್ದೇಶನ ನೀಡಿದೆ. ತೀರ್ಪುಗಳನ್ನು ಪ್ರಕಟಿಸುವಲ್ಲಿ ಆಗುವ ವಿಳಂಬದಿಂದ ಅರ್ಜಿದಾರರಿಗೆ ಸಮಸ್ಯೆಯಾಗಲಿದೆ ಎಂದು ಮುಖ್ಯನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠ ಅಭಿಪ್ರಾಯ ಪಟ್ಟಿದೆ. ಖಾಸಗಿ ಸ್ವಾತಂತ್ರ್ಯಕ್ಕೆ ಸಂಬಂಧಪಟ್ಟ ಪ್ರಕರಣಗಳಲ್ಲಿ ತ್ವರಿತವಾದ ತೀರ್ಪುಗಳ ಅಗತ್ಯವಿರುತ್ತದೆ. ಜಾಮೀನು ಅರ್ಜಿಗಳನ್ನು ಕುರಿತಾದ ತೀರ್ಪುಗಳನ್ನು ಅದೇ ದಿನ ಪ್ರಕಟಿಸಬೇಕು. ಒಂದೊಮ್ಮೆ ಕಾಯ್ದಿರಿಸಿದರೆ ಅವುಗಳನ್ನು ಮಾರನೇ ದಿನ ಪ್ರಕಟಿಸಬೇಕು ಎಂದು ತಿಳಿಸಿದೆ. ಜಾಮೀನು ಅಥವಾ ಶಿಕ್ಷೆಯ ರದ್ದತಿ ಆದೇಶವನ್ನು ಪ್ರಕಟಿಸಿದ ತಕ್ಷಣ ಜೈಲು ಅಧಿಕಾರಿಗಳಿಗೆ ತಿಳಿಸಬೇಕು ಮತ್ತು ವಿಚಾರಣೆ ಎದುರಿಸುತ್ತಿರುವ ಅಪರಾಧಿಯನ್ನು ಅದೇ ದಿನ ಅಥವಾ ಮರುದಿನ ಬಿಡುಗಡೆ ಮಾಡಬೇಕು ಎನ್ನುವುದೂ ಸೇರಿದಂತೆ ಹಲವಾರು ನಿರ್ದೇಶನಗಳನ್ನು ನೀಡಿದೆ.

**<><*<><>*><>**

ಭಟ್ಕಳದ ಶಿರಾಲಿ ಬಳಿ ಕಪ್ಪೆಚಿಪ್ಪು ತೆಗೆಯುವಾಗ ಉಂಟಾದ ದುರಂತದಲ್ಲಿ ಮೃತಪಟ್ಟ ಹನ್ನೊಂದು ಸಂತ್ರಸ್ತ ಕುಟುಂಬದವರನ್ನು ಇಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ಭೇಟಿಯಾಗಿ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಮಾಜಿ ಸಚಿವ ಶಿವಾನಂದ ನಾಯ್ಕ ಸೇರಿದಂತೆ ಹಲವರು ಇದ್ದರು. ನಂತರ ಮುರಿನಕಟ್ಟೆ ಧ್ವಂಸವನ್ನು ವಿರೋಧಿಸಿ ಭಾರತೀಯ ಜನತಾ ಪಕ್ಷದಿಂದ ಹಮ್ಮಿಕೊಂಡ ಪ್ರತಿಭಟನೆಯಲ್ಲಿ ಪಾಲ್ಗೊಂಡರು.

**<><*<><>*><>**

ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಅವರು ಇಂದು ಯಾದಗಿರಿ ನಗರದಲ್ಲಿ ವಿವಿಧ ಸಾರ್ವಜನಿಕ ಸ್ಥಳಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬಸ್ ನಿಲ್ದಾಣದ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಸಾರ್ವಜನಿಕ ಶೌಚಾಲಯಗಳನ್ನು ಪರಿಶೀಲಿಸಿದ ಉಪಲೋಕಾಯುಕ್ತರು, ಶೌಚಾಲಯದಲ್ಲಿ ನಿಗದಿತ ಶುಲ್ಕಕ್ಕಿಂತ ಹೆಚ್ಚು ಹಣ ವಸೂಲಿ ಮಾಡುತ್ತಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ೩ ರೂಪಾಯಿ ಶುಲ್ಕ ನಿಗದಿಯಾಗಿದ್ದರೂ ೧೦ ರೂಪಾಯಿ ವಸೂಲಿ ಮಾಡುವುದು ಸರಿಯಲ್ಲ. ಸಾರ್ವಜನಿಕರಿಂದ ಹೆಚ್ಚುವರಿ ಹಣ ಪಡೆದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಬಳಿಕ, ಸಾರ್ವಜನಿಕರೊಂದಿಗೆ ಸಂವಾದ ನಡೆಸಿದ ಉಪಲೋಕಾಯುಕ್ತರು, ಬಸ್ ನಿಲ್ದಾಣದ ಸೌಲಭ್ಯಗಳ ಕುರಿತು ಅಭಿಪ್ರಾಯ ಸಂಗ್ರಹಿಸಿದರು. ಸಾರ್ವಜನಿಕರ ಸಮಸ್ಯೆ ಪರಿಹರಿಸಲು ಪ್ರಾಮಾಣಿಕವಾಗಿ ನಿರ್ವಹಿಸಬೇಕು ಎಂದು ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**<><*<><>*><>**

ಚುನಾವಣಾ ಆಯೋಗದ ನಿರ್ದೇಶನದಂತೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆ ಕೈಗೊಳ್ಳಲಾಗುತ್ತಿದ್ದು ಇದನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಎಲ್ಲ ರಾಜಕೀಯ ಪಕ್ಷಗಳು ಸಹಕಾರ ನೀಡುವಂತೆ ಜಿಲ್ಲಾಧಿಕಾರಿ ಭನ್ವರ್ ಸಿಂಗ್ ಮೀನಾ ಮನವಿ ಮಾಡಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆ ಪಾರದರ್ಶಕತೆಯಿಂದ ಕೂಡಿದ್ದು, ಇದರ ಉದ್ದೇಶ

ಅರ್ಹ ಮತದಾರರನ್ನು ಮತಪಟ್ಟಿಗೆ ಸೇರಿಸುವುದು ಮತ್ತು ಅನರ್ಹರನ್ನು ನಿಯಮಾನುಸಾರ ಕೈಬಿಡುವುದಾಗಿದೆ. ಯಾವುದೇ ತರಹದ ಸುಳ್ಳು ಮಾಹಿತಿ ಹಾಗೂ ಅಪಪ್ರಚಾರಗಳಿಗೆ ಕಿವಿಗೊಡಬಾರದು ಎಂದು ತಿಳಿಸಿದ್ದಾರೆ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತಂತೆ ಪಾರದರ್ಶಕ ಮತದಾರರ ಪಟ್ಟಿ ತಯಾರಿಕೆಗೆ ಬಿ.ಎಲ್.ಓಗಳ ಪಾತ್ರ ಪ್ರಮುಖವಾಗಿದೆ ಎಂದು ಗದಗ ಜಿಲ್ಲಾ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದ್ದಾರೆ.

**<><*<><>*><>**

ಕಾವೇರಿ ೨ನೇ ಹಂತದ ೬೦೦ ಮಿಲಿಮೀಟರ್ ವ್ಯಾಸದ ಮುಖ್ಯ ಕುಡಿಯುವ ನೀರಿನ ಕೊಳವೆಯಲ್ಲಿ ಉಂಟಾಗಿರುವ ಭಾರೀ ಸೋರಿಕೆಯನ್ನು ತಡೆಗಟ್ಟಲು ಬೆಂಗಳೂರು ಜಲಮಂಡಳಿಯು ತುರ್ತು ದುರಸ್ತಿ ಕಾಮಗಾರಿ ಕೈಗೆತ್ತಿಕೊಂಡಿದೆ. ಈ ಹಿನ್ನೆಲೆಯಲ್ಲಿ ದುರಸ್ತಿ ಕಾಮಗಾರಿ ಮುಗಿಯುವವರೆಗೆ ಮೈಸೂರು ರಸ್ತೆ ಸೇವಾ ವ್ಯಾಪ್ತಿಯ ಹಲವು ಪ್ರದೇಶಗಳಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ಸೌತ್ ಎಂಡ್ ವೃತ್ತದ ಮುಖಾಂತರ ಮೈಸೂರು ರಸ್ತೆ ಸೇವಾ ಪ್ರದೇಶಗಳಿಗೆ ಪ್ರತಿನಿತ್ಯ ೧೪ ಎಂಎಲ್‌ಡಿ ನೀರು ಸರಬರಾಜು ಮಾಡುವ ಪೈಪ್‌ಲೈನ್ ರಸ್ತೆಯ ಮುಖ್ಯ ಕೊಳವೆಯಲ್ಲಿ ರಂಧ್ರ ಉಂಟಾಗಿ, ಹೆಚ್ಚಿನ ಒತ್ತಡದಲ್ಲಿ ನೀರು ಚಿಮ್ಮುತ್ತಿದೆ. ಸಾರ್ವಜನಿಕರ ಹಿತದೃಷ್ಟಿ ಹಾಗೂ ಅಮೂಲ್ಯವಾದ ನೀರಿನ ಸದ್ಬಳಕೆಯ ಉದ್ದೇಶ ಸುರಾನ ಕಾಲೇಜು ಬಳಿ ಇರುವ ೨೪ ಅಂಗುಲದ ಕವಾಟವನ್ನು ೮ ಗಂಟೆಗಳ ಕಾಲ ಬಂದ್ ಮಾಡಿ ದುರಸ್ತಿ ಕಾಮಗಾರಿ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಸಾರ್ವಜನಿಕರು ಹಾಗೂ ಗ್ರಾಹಕರು ಮಂಡಳಿಯೊಂದಿಗೆ ಸಹಕರಿಸಬೇಕಾಗಿ ಮನವಿ ಮಾಡಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ,

ಮುಂದಿನ ೫ ದಿನಗಳಲ್ಲಿ ರಾಜ್ಯಾದ್ಯಂತ ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದಿನಿಂದ ಜೂನ್ ೨ರವರೆಗೆ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಮಳೆಯಾಗಿದೆ. ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಇಂದು ಮಳೆಯಾಗಲಿದೆ. ಕೋಲಾರ, ಹಾಸನ, ರಾಮನಗರ ಸೇರಿದಂತೆ ಹಲವೆಡೆ ಹಗುರದಿಂದ ಗುಡುಗು ಸಹಿತ ಮಳೆಯಾಗಲಿದೆ. ಬೆಂಗಳೂರು ನಗರದಲ್ಲಿ ರಾತ್ರಿ ವೇಳೆ ಬಿರುಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

**<>><><** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **><><<>**